...

343 (447) : ಶ್ರೀ ಲಾಲ್‌ಜಿ ಆರ್. ಮೆಂಡನ್ (ಕಾಪು) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಾಪು ಪೊಲೀಸ್ ಠಾಣೆಯನ್ನು ಮೇಲ್ದರ್ಜೆಗೆ ಏರಿಸಲಾಗಿದೆಯೆ;

ಆ) ಈ ಬಗ್ಗೆ ರಾಜ್ಯ ಪ್ರಪತ್ರದಲ್ಲಿ ಪ್ರಕಟಣೆ ನೀಡಲಾಗಿದೆಯೆ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಹೌದು

ಆ) ಹೌದು ಅಭಿಸೂಚನೆ ಹೊರಡಿಸುವ ಹಂತದಲ್ಲಿದೆ.

...

346 (378) : ಶ್ರೀ ಲಕ್ಷ್ಮಣ್ ಸಂಗಪ್ಪ ಸಾವದಿ (ಅಥಣಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೊಂದರೆಯನ್ನು ಪರಿಹರಿಸಲು ಕೊಳವೆ ಬಾವಿ ತೋಡುವ ಸಲುವಾಗಿ ಎಷ್ಟು ಅನುದಾನ ಬಿಡುಗಡೆ ಮಾಡಿದೆ;

ಆ) ಇದರಲ್ಲಿ ಅಥಣಿ ತಾಲ್ಲೂಕಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ಹಾಗೂ ಇಲ್ಲಿಯವರೆಗೆ ಕೊರೆಯಲಾದ ಕೊಳವೆ ಬಾವಿಗಳೆಷ್ಟು; (ವಿವರ ನೀಡುವುದು)

ಇ) ಸಧ್ಯಕ್ಕೆ ಬೇಕಾಗಿರುವ ಕೊಳವೆ ಬಾವಿಗಳಿಗೆ ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗುವುದೇ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) 2003–04 ಮತ್ತು 2004–05ರಲ್ಲಿ ಕುಡಿಯುವ ನೀರಿನ ಕೊಳವೆ ಬಾವಿಗಳನ್ನು ತೆರೆಯಲು ಬೆಳಗಾವಿ ಜಿಲ್ಲಾ ಪಂಚಾಯತ್‌ಗೆ ಒಟ್ಟು ರೂ. 379.646 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಆ) 2003–04 ರಿಂದ ಇಲ್ಲಿಯವರೆವಿಗೆ ಅಥಣಿ ತಾಲ್ಲೂಕಿಗೆ ಬಿಡುಗಡೆ ಮಾಡಲಾದ ಒಟ್ಟು ರೂ. 55.83 ಲಕ್ಷಗಳಲ್ಲಿ 196 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ.

ಇ) ಅವಶ್ಯಕತೆ ಮತ್ತು ಅನುದಾನ ಲಭ್ಯತೆಗೆ ಅನುಗುಣವಾಗಿ ಬಿಡುಗಡೆ ಮಾಡಲಾಗುವುದು.

...

347 (381) : ಶ್ರೀ ಲಕ್ಷ್ಮಣ್ ಸಂಗಪ್ಪ ಸಾವದಿ (ಅಥಣಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾ ಬಲಕ್ಕೆ ಅನುಗುಣವಾಗಿ ಶಾಲಾ ಕೋಣೆಗಳು ಇದೆಯೇ;

ಆ) ಇಲ್ಲದಿದ್ದಲ್ಲಿ ಶಾಲಾ ಕೋಣೆಗಳ ಕಟ್ಟಡ ನಿರ್ಮಿಸಲು ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗಿದೆಯೆ;

ಇ) ಇದರಲ್ಲಿ ಅಥಣಿ ತಾಲ್ಲೂಕಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ

ನೀಡುವುದು)